ತೆರೆಯಲು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕಿನ ಸಿ.ಆರ್.ಎ.ಆರ್. ಸ್ಥಿತಿಯ ಮೇಲೆ ಅವಲಂಭಿಸಿದ್ದು ಬ್ಯಾಂಕಿನ ಸಿ.ಆರ್.ಎ.ಆರ್. ಸ್ಥಿತಿಯ ನೆಗಟಿವ್ ಇರುತ್ತದೆ.

ಪ್ರಸ್ತುತ ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ರೂ. 16.00 ಕೋಟಿ ನಷ್ಟದಲ್ಲಿದ್ದು. ಆರ್ಥಿಕವಾಗಿ ಸದೃಢವಾಗಿರುವುದಿಲ್ಲದ ಕಾರಣ, ಬ್ಯಾಂಕಿನ ಆರ್ಥಿಕ ಪರಿಸ್ಥಿತಿಯಲ್ಲಿ ಸುಧಾರಣೆ ಆಗುವವರೆಗೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಪ್ರಧಾನ ಕಛೇರಿಯಲ್ಲಿ ಪ್ರಾರಂಭಿಸುವುದು ಸಾಧುವಲ್ಲ.

ರಾಷ್ಟ್ರೀಯ ಅಭಿವೃದ್ಧಿ

942 (1069) ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರ ನಗರದ ಮಧ್ಯೆ ರಾಷ್ಟ್ರೀಯ ಹೆದ್ದಾರಿ ಸಂಖ್ಯೆ 7 ಮತ್ತು 234 ರಸ್ತೆಗಳು ಹಾದು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಹಾಗಿದ್ದಲ್ಲಿ, ನಗರದ ಮಧ್ಯೆ ಹಾದು ಹೋಗುತ್ತಿರುವುದರಿಂದ ನಗರದಲ್ಲಿ ವಾಹನಗಳ ದಟ್ಟನೆಯಿಂದಾಗಿ ಸಾರ್ವಜನಿಕರ ಸಂಚಾರಕ್ಕೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ, ಈ ವಾಹನ ದಟ್ಟಣೆಯನ್ನು ನಿಯಂತ್ರಿಸಲು ಹೊರ ವರ್ತುಲ ರಸ್ತೆಯನ್ನು ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಹೊರ ವರ್ತುಲ ರಸ್ತೆಯ ನಿರ್ಮಾಣಕ್ಕೆ ಸರ್ಕಾರ ಭೂಮಿಯನ್ನು ಸ್ವಾಧೀನಪಡಿಸಿಕೊಂಡಿದೆಯೇ;

ಉ) ಹಾಗಿದ್ದಲ್ಲಿ, ಹೊರ ವರ್ತುಲ ರಸ್ತೆಯ ನಿರ್ಮಾಣಕ್ಕೆ ಸರ್ಕಾರ ನಿಗಧಿಪಡಿಸಿರುವ ಅನುದಾನದ ಮೊತ್ತವೆಷ್ಟು;

ಊ) ಹೊರ ವರ್ತುಲ ರಸ್ತೆಯ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸುವುದು (ವಿವರಗಳನ್ನು ನೀಡುವುದು)?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಬಂದಿದೆ.

ಆ) ಬಂದಿದೆ.

ಇ) ಚಿಕ್ಕಬಳ್ಳಾಪುರ ನಗರದಲ್ಲಿ ಎರಡು ರಾಷ್ಟ್ರೀಯ ಹೆದ್ದಾರಿಗಳು (ರಾ.ಹೆ.–7 ಮತ್ತು ರಾ.ಹೆ.–234) ಹಾದು ಹೋಗುತ್ತಿರುತ್ತದೆ. ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ (NHAI) ವತಿಯಿಂದ ಚಿಕ್ಕಬಳ್ಳಾಪುರ ನಗರದ ವ್ಯಾಪ್ತಿಯಲ್ಲಿ ಹಾದುಹೋಗುವ ರಾ.ಹೆ.–7ರ ವಾಹನಗಳ ಸಂಚಾರ ದಟ್ಟಣೆಯನ್ನು ನಿಯಂತ್ರಿಸಲು ಈಗಾಗಲೇ ಚಿಕ್ಕಬಳ್ಳಾಪುರ ನಗರಕ್ಕೆ ಬೈಪಾಸ್ ರಸ್ತೆಯನ್ನು ನಿರ್ಮಿಸಲಾಗಿದ್ದು, ಸಂಚಾರಕ್ಕೆ ಮುಕ್ತಗೊಳಿಸಲಾಗಿದೆ. ಚಿಕ್ಕಬಳ್ಳಾಪುರ ನಗರದ ವ್ಯಾಪ್ತಿಯಲ್ಲಿ ಹಾದುಹೋಗುವ ರಾ.ಹೆ.–234ಕ್ಕೆ ಹೊರ ವಲಯ ರಸ್ತೆ ನಿರ್ಮಿಸಲು ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಈ) ಪ್ರಸ್ತುತ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಊ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಕೃಷಿ ಹವಾಮಾನ ಮೀಟರ್

943 (440) ಶ್ರೀ ಬಂಡೆಪ್ಪ ಕಾಶೆಂಪೂರ್ (ಬೀದರ್ ದಕ್ಷಿಣ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಕೃಷಿ ಹವಾಮಾನ ಕಂಡು ಹಿಡಿಯಲು ಮೀಟರ್ ಲಾಜಿಕಲ್ ಇಲಾಖೆ ಜಾರಿಯಲ್ಲಿದೆಯೇ;

ಆ) ಹಾಗಿದ್ದಲ್ಲಿ, ಎಲ್ಲಿ ಹಾಗೂ ಯಾವ ತಾಲ್ಲೂಕುಗಳಲ್ಲಿ ಜಾರಿಯಲ್ಲಿದೆ;

ಇ) ಹಾಗಿದ್ದಲ್ಲಿ, ಸಂಪೂರ್ಣ ಕರ್ನಾಟಕದಲ್ಲಿ ಜಾರಿಯಲ್ಲಿದೆಯೇ;

ಈ) ಹಾಗಿಲ್ಲದಿದ್ದಲ್ಲಿ, ರಾಜ್ಯದ ಎಲ್ಲಾ ಭಾಗಗಳಲ್ಲಿ ತೆರೆಯಲು ಸರ್ಕಾರಕ್ಕಿರುವ ತೊಂದರೆಗಳೇನು?